## ಕರ್ನಾಟಕ ಸರ್ಕಾರ

ವಿಷಯ :- ಶ್ರೀ ಕೆ.ಜಿ.ಜಗದೀಶ್, ಸಹಾಯಕ ಯೋಜನಾಧಿಕಾರಿ-2, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಇವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ - ಆದೇಶ.

ಓದಲಾಗಿದೆ :-1) ಕುಮಾರಿ ಲಕ್ಷ್ಮೀ.ಆರ್,ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಿಲ್ಲಾ ಪಂಚಾಯತ್ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರ ದೂರು ದಿನಾಂಕ:28.12.2015

2) ದೋಷಾರೋಪಣಾ ಪಟ್ಟಿಯೊಂದಿಗೆ ಜಾರಿ ಮಾಡಿದ ಕಾರಣ ಕೇಳುವ ನೋಟೀಸ್ ಸಂಖ್ಯೆ : ಗ್ರಾಅಪ 43 ಕೆಎಸ್ಎಸ್ 2016, ದಿನಾಂಕ : 14.12.2016.

3) ಶ್ರೀ ಕೆ.ಜಿ.ಜಗದೀಶ್, ಇವರು ಸಲ್ಲಿಸಿರುವ ಲಿಖಿತ ಹೇಳಿಕೆ, ದಿನಾಂಕ : 15.2.2017.

4) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 43 ಕೆಎಸ್ಎಸ್ 2016, ದಿನಾಂಕ : 22.03.2017.

5) ಲಕ್ಷ್ಮೀ. ಆರ್., ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರ ಮನವಿ ದಿನಾಂಕ: 14.07.2017.

*******

ಪ್ರಸ್ತಾವನೆ :-

ಕುಮಾರಿ ಆರ್. ಲಕ್ಷ್ಮೀ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಮೇಲೆ ಓದಲಾದ ಕ್ರಮಾಂಕ(1)ರ ದಿನಾಂಕ:28.12.2015ರಂದು ಶ್ರೀ ಕೆ.ಜಿ.ಜಗದೀಶ್, ಸಹಾಯಕ ಯೋಜನಾಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಇವರ ವಿರುದ್ಧ ಸಲ್ಲಿಸಿದ ದೂರಿನ ಹಿನ್ನೆಲೆಯಲ್ಲಿ ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಸರ್ಕಾರದ ದಿನಾಂಕ:14.12.2016ರಲ್ಲಿ ಶ್ರೀ ಕೆ.ಜಿ . ಜಗದೀಶ್, ಸಹಾಯಕ ಯೋಜನಾಧಿಕಾರಿ ಇವರ ವಿರುದ್ಧ ಶಿಸ್ತುಕ್ರಮ ಜರುಗಿಸಲು ಕರಡು ದೋಷಾರೋಪಣೆ ಪಟ್ಟಿ (ಅನುಬಂಧ - 1 ರಿಂದ 4) ಅನ್ನು ಜಾರಿಗೊಳಿಸಿ ಲಿಖಿತ ಸಮಜಾಯಿಷಿಯನ್ನು ಸಲ್ಲಿಸುವಂತೆ ಸೂಚಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (3)ರಲ್ಲಿ ದಿನಾಂಕ:15.2.2017ರಂದು ಶ್ರೀ ಜಗದೀಶ್, ಇವರು ಸಲ್ಲಿಸಿದ ಲಿಖಿತ ಹೇಳಿಕೆಯಲ್ಲಿ ತಮ್ಮ ವಿರುದ್ಧದ ಆರೋಪಗಳನ್ನು ಅಲ್ಲಗಳೆದಿರುತ್ತಾರೆ. ಆರೋಪಿತರು ಕುಮಾರಿ ಲಕ್ಷ್ಮೀ. ಆರ್. ಇವರ ಮೇಲೆ ದೈಹಿಕ ಹಲ್ಲೆ ಮಾಡಿರುವುದು ಗಂಭೀರ ಸ್ವರೂಪದ ಅಪರಾಧಿಕ ದುರ್ನಡತೆಯಾಗಿದ್ದು, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ನ್ನು ಉಲ್ಲಂಘಿಸಿರುವುದರಿಂದ ಸದರಿ ಆರೋಪದ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ಇಲಾಖಾ ವಿಚಾರಣೆ ಜರುಗಿಸಲು ನಿರ್ಧರಿಸಿ ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ದಿನಾಂಕ:22.03.2017 ರಂದು ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ಇಲಾಖಾ ವಿಚಾರಣಾಧಿಕಾರಿಯನ್ನಾಗಿ ಹಾಗೂ ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು ಬಿ ಮತ್ತು ಸಿ) ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ದಿನಾಂಕ: 14.07.2017ರಲ್ಲಿ ಕುಮಾರಿ ಲಕ್ಷ್ಮೀ. ಆರ್. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಮನವಿ ಸಲ್ಲಿಸಿ ದಿನಾಂಕ:01.07.2017 ರಂದು ನಡೆದ ಪ್ರಕರಣದ ವಿಚಾರಣೆಯಲ್ಲಿ ಹೇಳಿಕೆಗಳನ್ನು ನೀಡುವ ಸಂದರ್ಭದಲ್ಲಿ ವಿಚಾರಣಾಧಿಕಾರಿಗಳು ಒತ್ತಡ ಹೇರುವ ರೀತಿಯಲ್ಲಿ ವರ್ತಿಸಿದ್ದು, ವಿಚಾರಣಾ ನಡವಳಿಯಲ್ಲಿ ಹೇಳಿಕೆಗಳನ್ನು ದಾಖಲಿಸಲು ನಿರಾಕರಿಸಿ, ವಿಚಾರಣೆಯನ್ನು ಮುಂದೂಡಿದ್ದು, ಸದರಿಯವರಿಂದ ತಮಗೆ ನ್ಯಾಯ ಸಿಗುವ ಭರವಸೆ ಇರುವುದಿಲ್ಲವೆಂದು, ನನ್ನ ಮನವಿಯಲ್ಲಿನ ಅಂಶಗಳು ಹಾಗೂ ಈಗಾಗಲೇ ನೀಡಿರುವ ಲಿಖಿತ ಹೇಳಿಕೆಯಲ್ಲಿನ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು ಶ್ರೀ ಜಗದೀಶ್ ರವರ ವಿರುದ್ಧ ಸೂಕ್ತ ಶಿಸ್ತುಕ್ರಮ ಜರುಗಿಸಿ ನ್ಯಾಯ ಒದಗಿಸಿಕೊಡಬೇಕೆಂದು ಕೋರಿರುತ್ತಾರೆ.

ಆದ್ದರಿಂದ ಪ್ರಕರಣಕ್ಕೆ ಸಂಬಂಧಿಸಿದಂತೆ ಪಾರದರ್ಶಕ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರ ಬದಲಿಗೆ ಬೇರೆ ಇಲಾಖಾ ವಿಚಾರಣಾಧಿಕಾರಿಯನ್ನು ನೇಮಿಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 43 ಕೆಎಸ್ ಎಸ್ 2016**

**ಬೆಂಗಳೂರು, ದಿನಾಂಕ : 16.08.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಕೆ.ಜಿ.ಜಗದೀಶ್, ಸಹಾಯಕ ಯೋಜನಾಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಇವರ ವಿರುದ್ಧ ಸಲ್ಲಿಸಿದ ಆರೋಪಗಳಿಗೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರನ್ವಯ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರ ಬದಲಿಗೆ ಶ್ರೀಮತಿ ಆರ್.ಲತಾ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ರಾಮನಗರ ಇವರನ್ನು ಇಲಾಖಾ ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ದಿನಾಂಕ:22.03.2017ರ ಆದೇಶದಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು ಬಿ ಮತ್ತು ಸಿ) ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿದ್ದು, ಸದರಿಯವರು ಪ್ರಸ್ತುತ ಸೇವೆಗಳು-ಎ ಶಾಖೆಯ ಅಧೀನ ಕಾರ್ಯದರ್ಶಿ ರವರಾಗಿದ್ದು, ಪ್ರಸಕ್ತ ಇಲಾಖಾ ವಿಚಾರಣೆಯಲ್ಲಿಯೂ ಸದರಿಯವರನ್ನು ಮಂಡನಾಧಿಕಾರಿಯನ್ನಾಗಿ ಮುಂದುವರೆಸಿದೆ. ಈ ಹಿಂದೆ ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರಿಗೆ ಸದರಿ ಪ್ರಕರಣಕ್ಕೆ ಸಂಬಂಧಿಸಿದ ಒದಗಿಸಲಾದ ಎಲ್ಲಾ ದಾಖಲೆ / ಮಾಹಿತಿಗಳನ್ನು ಹಿಂಪಡೆದು ಶ್ರೀಮತಿ ಆರ್.ಲತಾ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ರಾಮನಗರ ಇವರಿಗೆ ಒದಗಿಸಿ ಇಲಾಖಾ ವಿಚಾರಣೆಯನ್ನು ನಡೆಸಲು ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದೆ.

ವಿಚಾರಣಾಧಿಕಾರಿಗಳು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 11 ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/8/17

(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು ಬಿ ಮತ್ತು ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

16/8/2017

ಇವರಿಗೆ :-

1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಶ್ರೀಮತಿ ಆರ್. ಲತಾ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬೆಂಗಳೂರು ನಗರ ಜಿಲ್ಲೆ.
5) ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.1242, 4ನೇ ಮುಖ್ಯರಸ್ತೆ, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು -560 040.
6) ಶ್ರೀ ಎಸ್.ರಂಗನಗೌಡ, ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು ಎ ಮತ್ತು ಸ್ವೀಮರ) ಹಾಗೂ ಮಂಡನಾಧಿಕಾರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
7) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
8) ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
9) ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
10) ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
11) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.